# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 802 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿನಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯ ಆಹಾರ ಸಾಮಗ್ರಿ ಸಾಗಾಣಿಕೆಗೆ ಕೆಲವು ಬಾರಿ ಟೆಂಡರ್ ಪ್ರಕ್ರಿಯೆ ನಡೆಸಿದರೂ ಸಾಗಾಣಿಕೆದಾರರು ಆಸಕ್ತಿ ತೋರದೆ ಇರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿಗೆ ಸಂಬಂಧಿಸಿದಂತೆ ಜನವರಿ-2022 ರಿಂದ ಡಿಸೆಂಬರ್-2022ರ ವರೆಗೆ ಮಧ್ಯಾಹ್ನ ಉಪಹಾರ ಯೋಜನೆಯ ಆಹಾರ ಸಾಮಗ್ರಿಗಳ ಸಾಗಾಣಿಕೆ ಮಾಡಲು ಜಿಲ್ಲಾ ಹಂತದಲ್ಲಿ ಟೆಂಡರ್ ಕರೆದು ಕರಾರು ಒಪ್ಪಂದ ಮಾಡಿಕೊಳ್ಳಲಾಗಿದ್ದು, ಸದರಿ ಕರಾರಿನಂತೆ ಆಹಾರ ಸಾಮಗ್ರಿಗಳು ಸಾಗಾಣಿಕೆಯಾಗುತ್ತಿರುವುದರಿಂದ ಈವರೆವಿಗೂ ಯಾವುದೇ ತೊಂದರೆಯಾಗಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಸದರಿ ಸಮಸ್ಯೆಯನ್ನು ಪರಿಹರಿಸಲು ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಆದರೆ ಜನವರಿ-2023 ರಿಂದ ಡಿಸೆಂಬರ್-2023ರವರೆಗೆ ಮಧ್ಯಾಹ್ನ ಉಪಹಾರ ಯೋಜನೆಯ ಆಹಾರ ಸಾಮಗ್ರಿಗಳ ಸಾಗಾಣಿಕೆಗೆ ಸಂಬಂಧಿಸಿದಂತೆ ಜಿಲ್ಲಾ ಹಂತದಲ್ಲಿ ಟೆಂಡರ್ ಕರೆಯಲಾಗಿದ್ದು, ಸದರಿ ಟೆಂಡರ್ ಪ್ರಕ್ರಿಯೆಯಲ್ಲಿ ಎಲ್-1 ಬಿಡ್‌ದಾರರಾಗಿ ಆಯ್ಕೆಯಾಗಿರುವವರು ಪ್ರತಿ ಕ್ವಿಂಟಾಲ್ ಆಹಾರ ಸಾಮಗ್ರಿಗಳ ಸಾಗಾಣಿಕೆಗೆ ರೂ 195/-ಗಳ ದರವನ್ನು ನಮೂದಿಸಿರುತ್ತಾರೆ. ಈ ದರವು ಕೇಂದ್ರ ಸರ್ಕಾರದಿಂದ ಪ್ರತಿ ಕ್ವಿಂಟಾಲ್ ಆಹಾರ ಸಾಮಗ್ರಿಗಳ ಸಾಗಾಣಿಕೆಗೆ ನಿಗದಿಪಡಿಸಲಾಗಿರುವ ಗರಿಷ್ಠ ಮಿತಿ ರೂ 150/-ಗಳನ್ನು ಮೀರಿರುವ ಕಾರಣ ದರ ಸಂಧಾನ ಪ್ರಕ್ರಿಯೆ ನಡೆಸಲಾಗಿಯೂ ಸಹ ಎಲ್-1 ಬಿಡ್‌ದಾರರು ನಿಗದಿತ ದರದಂತೆ ಆಹಾರ ಸಾಮಗ್ರಿಗಳ ಸಾಗಾಣಿಕೆ ಮಾಡಲು ಒಪ್ಪಿರದ ಕಾರಣ, ನಿಗದಿತ ಸಾಗಾಣಿಕಾ ದರದ ಮಿತಿಯೊಳಗೆ ಟೆಂಡರ್ ಅರ್ಜಿ ಸಲ್ಲಿಕೆಯಾಗದೇ ಇದ್ದಲ್ಲಿ, ಕೆ.ಟಿ.ಪಿ.ಪಿ ನಿಯಮಾವಳಿಗಳಂತೆ ಮರು ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ಸೂಚನೆಯನ್ನು ನೀಡಿರುತ್ತಾರೆ.<br><br>ಪ್ರಸ್ತುತ ಮರು ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯ ತಾಲ್ಲೂಕಿಗೆ ಸಂಬಂಧಿಸಿದಂತೆ ಜನವರಿ-2022 ರಿಂದ ಡಿಸೆಂಬರ್-2022ರವರೆಗೆ ಮಧ್ಯಾಹ್ನ ಉಪಹಾರ ಯೋಜನೆಯ ಆಹಾರ ಸಾಮಗ್ರಿಗಳ ಸಾಗಾಣಿಕೆ ಮಾಡಲು ಕಾರ್ಯಾದೇಶ ನೀಡಲಾಗಿದ್ದ ಟೆಂಡರ್‌ದಾರಿಗೆ ದಿನಾಂಕ: 31.01.2023ರವರೆಗೆ ಆಹಾರ ಸಾಮಗ್ರಿಗಳ ಸಾಗಾಣಿಕೆಯನ್ನು ಮುಂದುವರೆಸಲು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ದಕ್ಷಿಣ ಕನ್ನಡ ಇವರು ಕಾರ್ಯಾದೇಶವನ್ನು ನೀಡಿರುವುದರಿಂದ ಮಧ್ಯಾಹ್ನ ಉಪಹಾರ ಯೋಜನೆಯ ಅನುಷ್ಠಾನಕ್ಕೆ ಯಾವುದೇ ತೊಂದರೆಯಾಗಿರುವುದಿಲ್ಲ. |

| | | |
|---|---|---|
| ಇ) | ಸುಳ್ಯ ತಾಲ್ಲೂಕಿನಲ್ಲಿ ಎಲ್ಲಾ ಶಾಲೆಗಳು ವಿಸ್ತಾರವಾದ ಭೌಗೋಳಿಕ ವ್ಯಾಪ್ತಿಯಲ್ಲಿ ದೂರ ದೂರದಲ್ಲಿ ಇದ್ದು ಹಾಗೂ ಗುಡ್ಡ ಗಾಡು ಪ್ರದೇಶದ ಎತ್ತರವಾದ ಸ್ಥಳಗಳಲ್ಲಿ ವಿರಳವಾಗಿ ಹರಡಿಕೊಂಡಿರುವ ಹಿನ್ನಲೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ ಈಗಿರುವ ಗರಿಷ್ಠ ಸಾಗಾಣಿಕಾ ದರವನ್ನು ಪರಿಷ್ಕರಿಸಲು ಸರ್ಕಾರ ಈ ಕೂಡಲೇ ಕ್ರಮ ಕೈಗೊಳ್ಳುವುದೇ? | ಮಧ್ಯಾಹ್ನ ಉಪಹಾರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುವುದರಿಂದ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಸದರಿ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ಮಧ್ಯಾಹ್ನ ಉಪಹಾರ ಯೋಜನೆಯ ಆಹಾರ ಸಾಮಗ್ರಿಗಳ ಪ್ರತಿ ಕ್ವಿಂಟಾಲ್ ಗರಿಷ್ಠ ಸಾಗಾಣಿಕೆ ದರವನ್ನು ಕೇಂದ್ರ ಸರ್ಕಾರವು ನಿಗದಿಪಡಿಸಿರುವುದರಿಂದ ರಾಜ್ಯ ಸರ್ಕಾರದ ಹಂತದಲ್ಲಿ ಸದರಿ ಸಾಗಾಣಿಕಾ ದರವನ್ನು ಪರಿಷ್ಕರಿಸಲು ಅವಕಾಶವಿರುವುದಿಲ್ಲ. |

ಇಪಿ 74 ಎಂಎಂಎಸ್ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ
ಸಕಾಲ ಸಚಿವರು.